Date :25.10.2025

ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**– ಮುಂದುವರಿದ ಮುಖ್ಯ ವಿಚಾರಣೆ – ಅರ್ಜಿದಾರರ ಪರ ಶ್ರೀ ಎನ್.ಡಿ.ಎಂ. ವಕೀಲರಿಂದ –**

ನಾನು ಈ ಕೇಸಿನಲ್ಲಿ ಅರ್ಜಿದಾರಳಿದ್ದು, ನನ್ನ ಮುಖ್ಯವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸರಿ ಇರುತ್ತವೆ.

ನನ್ನ ಸಾಕ್ಷಿಗೆ ಬೆಂಬಲಿತವಾಗಿ, ನನ್ನ ಮಾಲೀಕತ್ವದ ಸ್ವಾಧೀನ ಪಡಿಸಿಕೊಂಡ ಜಮೀನಿನ ಬಾಬ್ತು ನೀಡಿದ ಪರಿಹಾರ ಕಡಿಮೆ ಇರುವುದೆಂದು ಹೇಳುತ್ತಾ ನಾನು ಚಿತ್ರದುರ್ಗ ಜಿಲ್ಲಾಧಿಕಾರಿಗಳಿಗೆ ಅರ್ಜಿ ಸಲ್ಲಿಸಿದ್ದು, ಅದರ ಪ್ರತಿ ಹಾಜರುಪಡಿಸಿದ್ದು, ಅದನ್ನು ನಿಪಿ–1 ಎಂದು, ಅರ್ಜಿಯಲ್ಲಿ ಕಾಣಿಸಿದ ಆಸ್ತಿಯ ಬಗ್ಗೆ ಇರುವ 2021–22 ಮತ್ತು 2023–24 ನೇ ಸಾಲಿನ 2 ಪಹಣಿ ಪ್ರತಿ ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–2 ಮತ್ತು 3 ಎಂದು, ದಿಃ 21.06.2021 ರಂದು 1 ನೇ ಎದುರುದಾರರು ನನಗೆ ಕಳುಹಿಸಿದ ಅವಾರ್ಡ ನೋಟೀಸಿನ ನಕಲು ದೃಢೀಕೃತ ಪ್ರತಿ ಹಾಜರುಪಡಿಸಿದ್ದು, ಅದನ್ನು ನಿಪಿ–4 ಎಂದು ಗುರುತಿಸಲಾಯಿತು.

ಮೇಲಿನ ನನ್ನ ಸಾಕ್ಷಿಯನ್ನು ಪರಿಗಣಿಸಿ ಅರ್ಜಿಯಲ್ಲಿ ಕೋರಿದಂತೆ ಎದುರುದಾರರ ವಿರುದ್ಧ ಆದೇಶ ಮಾಡಲು ಕೋರುತ್ತೇನೆ.

**– ಪಾಟೀ ಸವಾಲು – ಎದುರುದಾರ 1 ರವರ ಪರ ಶ್ರೀ ಜಿ.ಎಸ್.ಎ. ವಕೀಲರಿಂದ –**

ಎದುರುದಾರರು ಮತ್ತು ಅವರ ಪರ ವಕೀಲರು ಗೈರು ಹಾಜರಿದ್ದು, ನ್ಯಾಯಯುತ ದೃಷ್ಟಿಯಿಂದ ಒಂದು ಕಾಲಾವಕಾಶ ನೀಡಿ ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಿದೆ)
*ಓದಿ ಹೇಳಿ ಕೇಳಿ ಸರಿ ಇದೆ.*

1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿತ್ರದುರ್ಗ